**ಓ:ಎಸ್:ನಂ.114/2015**

**ಪಿ.ಡಬ್ಲ್ಯೂ-3**

***<u>ದಿಃ 05-08-2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>***

***<u>ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಸಿ ಎಸ್ ಎಸ್ ವಕೀಲರಿಂದ</u>***

ನಾನು *10* ನೇ ತರಗತಿಯ ವರೆಗೆ ವ್ಯಾಸಾಂಗ ಮಾಡಿರುತ್ತೇನೆ. ದಾವಾ ಆಸ್ತಿಯನ ಸರ್ವೇ ನಂ.*43* ಒಟ್ಟು ವಿಸ್ತೀರ್ಣ *8* ಎಕರೆ ಜಮೀನು ಇದೆ. ಸರ್ವೇ ನಂ.*43* ರಲ್ಲಿ ಒಟ್ಟು *30* ಎಕರೆ ಜಮೀನು ಇದೆ ಎಂದರೆ ಸಾಕ್ಷಿಯು ನನಗೆ ಮಾಹಿತಿ ಇಲ್ಲ ಎಂದು ಸಾಕ್ಷ್ಯ ನೀಡುತ್ತಾರೆ. ದಾವಾ ಸ್ವತ್ತಿನ ಅಕ್ಕಪಕ್ಕ ನನಗೆ ಸೇರಿದ ಯಾವುದೇ ಜಮೀನು ಇರುವುದಿಲ್ಲ. ದಾವಾ ಸ್ವತ್ತಿನ ಚಕ್ಕುಬಂಧಿ ಬಗ್ಗೆ ನನಗೆ ಮಾಹಿತಿ ಇಲ್ಲ. ವಾದಿಯು ನಮ್ಮ ತಂದೆಯ ಸ್ನೇಹಿತರು. ವಾದಿಯು ಕ್ರಯಕ್ಕೆ ಪಡೆದುಕೊಂಡಿರುವ ಕ್ರಯಪತ್ರವನ್ನು ನಾನು ನೋಡಿರುತ್ತೇನೆ . ಯಾವ ದಿನಾಂಕ ಮತ್ತು ಯಾವ ತಿಂಗಳಿನಂದು ಕ್ರಯ ಪತ್ರ ವಾಗಿದೆ ಎಂದರೆ ನನಗೆ ಗೊತ್ತಿಲ್ಲ. ಈ ದಾವೆಯ ಪ್ರತಿವಾದಿ ನನಗೆ ಗೊತ್ತಿರುವುದಿಲ್ಲ. ದಾವಾ ಸ್ವತ್ತಿನ ಸರ್ವೇ ನಂ. ನಲ್ಲಿ ಪ್ರತಿವಾದಿಗೆ ಸೇರಿದ *2* ಎಕರೆ *36* ಗುಂಟೆ ಜಮೀನು ಇದೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿಗೆ ಸೇರಿದ ಸ್ವತ್ತು ದಾವಾ ಸರ್ವೇ ನಂ. ನ ಆಗ್ನೇಯ ಮೂಲೆಯಲ್ಲಿದೆ ಎಂದರೆ ನನಗೆ ಗೊತ್ತಿಲ್ಲ. ಸರ್ವೇ ನಂ.*43* ರಲ್ಲಿ ಯಾರು ಯಾರು ಎಷ್ಟು ಎಕರೆ ವಿಸ್ತೀರ್ಣದಲ್ಲಿ ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ವಾದಿಯು ನಮ್ಮ ತಂದೆಯ ಸ್ನೇಹಿತರಾದ ಕಾರಣ ನನಗೆ ಈ ದಾವೆಯ ಸಂಗತಿಗಳ ಬಗ್ಗೆ ಗೊತ್ತಿಲ್ಲದಿದ್ದರು ಸಹ ನಾನು ಸುಳ್ಳು ಸಾಕ್ಷ್ಯ ನೀಡುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

***(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)***

**ಓ. ಕೇ. ಸ. ಇ. ಎ. ಒ.**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

***ಪ್ರ.ದ.ನ್ಯಾ.ದಂ.ರವರು,ತರೀಕೆರೆ.***